All India Radio: Bangalore
Regional Bulletin In Kannada
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

03.03.2025 6.40 P.M.

****************

ಮುಖ್ಯಾಂಶಗಳು

- ಹಣಕಾಸಿನ ಪರಿಸ್ಥಿತಿ ಪರಿಶೀಲಿಸಿ ಗುತ್ತಿದಾರರ ಬಾಕಿ ಬಿಲ್ಲುಗಳ ಪಾವತಿ ಬಗ್ಗೆ ಪರೀಶಿಲನೆ-ಮುಖ್ಯಮಂತ್ರಿ ಸಿದ್ದರಾಮಯ್ಯ
- ಕನಿಷ್ಟ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ಖರೀದಿಸುವ ಆಹಾರ ಧಾನ್ಯಗಳ ಗುಣಮಟ್ಟ ಕಾಪಾಡುವಂತೆ ಸರ್ಕಾರ ಸೂಚನೆ
- ಕರ್ನಾಟಕದ ಅಭಿವೃದ್ಧಿ ಮಾದರಿಗೆ ವಿಶ್ವವೇ ಮೆಚ್ಚುಗೆ - ಜಂಟಿ ಅಧಿವೇಶನದಲ್ಲಿ ರಾಜ್ಯಪಾಲರಿಂದ ಶ್ಲಾಘನೆ
- ರಾಜ್ಯ ಸರ್ಕಾರದಿಂದ ಅಭಿವೃದ್ಧಿ ಕಡಗಣನೆ; ರಾಜ್ಯಪಾಲರ ಭಾಷಣದ ಬಗ್ಗೆ ಬಿಜೆಪಿ ಅಸಮಾಧಾನ

****************

ಸರ್ಕಾರದಲ್ಲಿನ ಹಣಕಾಸಿನ ಪರಿಸ್ಥಿತಿ ಅವಲೋಕಿಸಿ, ಗುತ್ತಿಗೆದಾರರ ಬಾಕಿ ಬಿಲ್ಲುಗಳ ಪಾವತಿ ಬಗ್ಗೆ ಪರಿಶೀಲಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ವಿಧಾನಸೌಧದಲ್ಲಿ ರಾಜ್ಯ ಗುತ್ತಿಗೆದಾರರ ಸಂಘದ ಪದಾಧಿಕಾರಿಗಳೊಂದಿಗೆ ಸಭೆ ನಡೆಸಿ ಬಳಿಕ ಮಾತನಾಡಿದ ಅವರು ಬಾಕಿಯಿರುವ ಮೊತ್ತಗಳ ಪಾವತಿಗೆ ಮನವಿ ಸಲ್ಲಿಸಿದ್ದು ಏಪ್ರಿಲ್ ತಿಂಗಳಲ್ಲಿ ಸಾಧ್ಯವಾದಷ್ಟು ಬಾಕಿ ಬಿಲ್ಲುಗಳನ್ನು ಪಾವತಿಸಲು ಪ್ರಯತ್ನಿಸಲಾಗುವುದು ಎಂದು ತಿಳಿಸಿದ್ದಾರೆ.

ಡಿ.ಕೆ.ಶಿವಕುಮಾರ್ ಅವರು ಇದೇ ಅವಧಿಯಲ್ಲಿ ಮುಖ್ಯಮಂತ್ರಿಗಳಾಗುವ ಸಾಧ್ಯತೆ ಬಗ್ಗೆ ಮಾಜಿ ಮುಖ್ಯಮಂತ್ರಿ ವೀರಪ್ಪ ಮೊಯಿಲಿ ಹೇಳಿಕೆ ಬಗ್ಗೆ ಪ್ರತಿಕ್ರಿಯೆ ನೀಡಿ, ಈ ವಿಷಯದಲ್ಲಿ ಹೈಕಮಾಂಡ್ ತೀರ್ಮಾನವೇ ಅಂತಿಮವಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ಧ್ವನಿ: ಮುಖ್ಯಮಂತ್ರಿ ಸಿದ್ದರಾಮಯ್ಯ ( ೩೫ ಸೆಕೆಂಡ್‌ಗಳು)

****************

ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ಖರೀದಿಸುವ ಆಹಾರ ಧಾನ್ಯಗಳ ಗುಣಮಟ್ಟ ಕಾಪಾಡಬೇಕು ಎಂದು ಆಹಾರ ಸಚಿವ ಕೆ.ಹೆಚ್.ಮುನಿಯಪ್ಪ ತಿಳಿಸಿದ್ದಾರೆ.

ವಿಧಾನಸೌಧದಲ್ಲಿಂದು ರಾಜ್ಯದ ಎಲ್ಲಾ ಜಿಲ್ಲಾಧಿಕಾರಿ ಹಾಗೂ ಆಹಾರ ಇಲಾಖೆಯ ಉಪ ನಿರ್ದೇಶಕರು, ಜಿಲ್ಲೆಯ ವ್ಯವಸ್ಥಾಪಕ ನಿರ್ದೇಶಕರು ಹಾಗೂ ಖರೀದಿ ಏಜೆನ್ಸಿ ಮುಖ್ಯಸ್ಥರೊಂದಿಗೆ ವಿಡಿಯೋ ಸಂವಾದದ ಮೂಲಕ ಅವರು ಸಭೆ ನಡೆಸಿದರು.

ಆಹಾರ ಧಾನ್ಯಗಳ ಗುಣಮಟ್ಟದಲ್ಲಿ ವ್ಯತ್ಯಾಸವಿದ್ದಲ್ಲಿ ಅವರ ವಿರುದ್ಧ ಕ್ರಮ ತೆಗೆದುಕೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ರೈತರಿಂದ ಖರೀದಿಸಿ ಆಹಾರ ಧಾನ್ಯಗಳಿಗೆ ಸರಿಯಾದ ಸಮಯಕ್ಕೆ ಹಣ ಸಂದಾಯ ಮಾಡಬೇಕು ಎಂದು ತಿಳಿಸಿದ್ದಾರೆ.

ಫೆಬ್ರವರಿ ತಿಂಗಳ ೫ ಕೆಜಿ ಅಕ್ಕಿಯನ್ನು ಸೇರಿಸಿ ಈ ತಿಂಗಳು ೧೫ ಕೆಜಿ ಅಕ್ಕಿ ವಿತರಿಸಲು ತೀರ್ಮಾನಿಸಿದ್ದು ಅರ್ಹ ಫಲಾನುಭವಿಗಳಿಗೆ ವಿತರಿಸಲು ಕ್ರಮವಹಿಸಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

*****************

ಈ ವರ್ಷದ ಮೊದಲ ವಿಧಾನಸಭಾ ಅಧಿವೇಶನ ರಾಜ್ಯಪಾಲ ಥಾವರಚಂದ್ ಗೆಹ್ಲೋಟ್ ಅವರ ಭಾಷಣದೊಂದಿಗೆ ಇಂದು ಆರಂಭವಾಗಿದೆ.

ರಾಜ್ಯದಲ್ಲಿ ಸಂವಿಧಾನದ ಆಶಯದಂತೆ ಸರ್ಕಾರ ನಡೆಸುವ ಮೂಲಕ ಸರ್ವ ಸಮುದಾಯಕ್ಕೂ ಸಾಮಾಜಿಕ ನ್ಯಾಯ ಒದಗಿಸುವುದು, ರಾಜ್ಯವನ್ನು ಆರ್ಥಿಕವಾಗಿ ಸಧೃಡವಾಗಿ ರೂಪಿಸುವುದು ಸರ್ಕಾರದ ಪ್ರಥಮ ಆದ್ಯತೆಯಾಗಿದೆ ಎಂದು ರಾಜ್ಯಪಾಲ ಥಾವರಚಂದ್ ಗೇಹ್ಲೋಟ್ ತಿಳಿಸಿದ್ದಾರೆ.

ವಿಧಾನಸಭೆಯಲ್ಲಿ ಜಂಟಿ ಅಧಿವೇಶನ ಉದ್ದೇಶಿಸಿ ಭಾಷಣ ಮಾಡಿದ ಅವರು, ಕರ್ನಾಟಕದ ಅಭಿವೃದ್ಧಿ ಮಾದರಿಯನ್ನು ವಿಶ್ವವೇ ಕೊಂಡಾಡುತ್ತಿದೆ ಎಂದು ತಿಳಿಸಿದ್ದಾರೆ. ವಿಧಾನಮಂಡಲದ ಜಂಟಿ ಅಧಿವೇಶನವನ್ನುದ್ದೇಶಿಸಿ ಭಾಷಣ ಮಾಡಿದ ಅವರು, ವಿಶ್ವ ಸಂಸ್ಥೆಯ ಮುಖ್ಯಸ್ಥರೇ ಬಂದು ರಾಜ್ಯ ಸರ್ಕಾರದ ಸಾಧನೆಯನ್ನು ಕೊಂಡಾಡಿದ್ದಾರೆ ಎಂದು ಹೇಳಿದರು. ರಾಜ್ಯ ಸರ್ಕಾರ ಮಹತ್ವಾಕಾಂಕ್ಷೆಯ ಐದು ಗ್ಯಾರಂಟಿ ಯೋಜನೆಗಳಿಗೆ ವಾರ್ಷಿಕ ೫೨ ಸಾವಿರ ಕೋಟಿ ರೂಪಾಯಿ ವೆಚ್ಚ ಮಾಡಿದ್ದು, ರಾಜ್ಯದಲ್ಲಿ ವಿವಿಧ ಕಲ್ಯಾಣ ಕಾರ್ಯಕ್ರಮಕ್ಕಾಗಿ ವರ್ಷಕ್ಕೆ ೬೦ ಸಾವಿರ ಕೋಟಿ ರೂಪಾಯಿ ವೆಚ್ಚ ಮಾಡಲಾಗುತ್ತದೆ ಎಂದು ತಿಳಿಸಿದ್ದಾರೆ.

ರಾಜ್ಯದಲ್ಲಿ ಕಳೆದ ೧೯ ತಿಂಗಳಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣವಾಗಿ ನಿಯಂತ್ರಣದಲ್ಲಿದ್ದು ಕಳೆದ ೧೯ ತಿಂಗಳಲ್ಲಿ ಯಾವುದೇ ಕಾನೂನು ಸಂಬಂಧದ ಸಮಸ್ಯೆ ಉದ್ಭವಿಸಲಿಲ್ಲ ಎಂದು ರಾಜ್ಯಪಾಲರು ಸಂತೃಪ್ತಿ ವ್ಯಕ್ತಪಡಿಸಿದ್ದಾರೆ.

ಬಳಿಕ ಇತ್ತೀಚೆಗೆ ನಿಧನರಾದ ಮಾಜಿ ಪ್ರಧಾನಮಂತ್ರಿ ಡಾ ಮನಮೋಹನ್ ಸಿಂಗ್, ಅಂತಾರಾಷ್ಟ್ರೀಯ ಖ್ಯಾತಿಯ ಹೆಸರಾಂತ ಸಿನೆಮಾ ನಿರ್ದೇಶಕ ಶ್ಯಾಮ್ ಬೆನೆಗಲ್, ಹಿರಿಯ ಸಾಹಿತಿ ನಾ.ಡಿಸೋಜ, ಜಾನಪದ ಗಾಯಕಿ ಸುಕ್ರಿ ಬೊಮ್ಮಗೌಡ ಅವರ ನಿಧನಕ್ಕೆ ವಿಧಾನಸಭೆಯಲ್ಲಿ ಸಂತಾಪ ಸೂಚಿಸಲಾಯಿತು.

ಸಂತಾಪ ಸೂಚನೆ ಪ್ರಸ್ತಾವನೆ ಮೇಲೆ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಪ್ರತಿಪಕ್ಷ ನಾಯಕ ಆರ್ ಅಶೋಕ್ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಡಾ.ಮಹಮೋಹನ್ ಸಿಂಗ್ ತಮ್ಮ ಅಧಿಕಾರಾವಧಿಯಲ್ಲಿ ದೇಶದ ಆರ್ಥಿಕ ಪ್ರಗತಿಗೆ ನೀಡಿದ ಕೊಡುಗೆಯನ್ನು ಮುಕ್ತ ಕಂಠದಿಂದ ಶ್ಲಾಘಿಸಿದರು.

****************

ವಿಧಾನಮಂಡಲದ ಜಂಟಿ ಅಧಿವೇಶನದ ಮೂಲಕ ವಿಧಾನಪರಿಷತ್ ಕಲಾಪ ಇಂದಿನಿಂದ ವಿದ್ಯುಕ್ತವಾಗಿ ಆರಂಭವಾಯಿತು. ಸಭಾಪತಿ ಬಸವರಾಜ ಹೊರಟ್ಟಿ ಮೊದಲು ಸಂವಿಧಾನದ ಪೀಠಿಕೆ ವಾಚನ ಮಾಡಿದರು.

ಬಳಿಕ ವಿಧಾನಸಭೆಯಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಜಂಟಿ ಅಧಿವೇಶನ ಪ್ರಯುಕ್ತ ರಾಜ್ಯವನ್ನು ಉದ್ದೇಶಿಸಿ ಮಾಡಿದ ಭಾಷಣವನ್ನು ವಿಧಾನ ಪರಿಷತ್ ಕಾರ್ಯದರ್ಶಿ ಮಂಡನೆ ಮಾಡಿದರು.

ರಾಜ್ಯಪಾಲರ ಭಾಷಣದಲ್ಲಿ ಕರ್ನಾಟಕ ಇಂದು ವಿವಿಧ ಕ್ಷೇತ್ರಗಳಲ್ಲಿ ಸಾಧಿಸಿರುವ ಪ್ರಗತಿಯ ಮುನ್ನೋಟ ಹಾಗೂ ಸರ್ಕಾರ ಕೈಗೊಂಡಿರುವ ಯೋಜನೆಗಳನ್ನು ರಾಜ್ಯಪಾಲರು ಭಾಷಣದಲ್ಲಿ ಅನಾವರಣಗೊಳಿಸಿದರು.

ನಂತರ ಸಭಾಪತಿ ಅವರು ಇತ್ತೀಚೆಗೆ ಆಗಲಿದ ಗಣ್ಯರಿಗೆ ಗೌರವ ಸೂಚಿಸುವ ಸಂತಾಪ ನಿರ್ಣಯ ಮಂಡನೆ ಮಾಡಿದರು.

ಮಾಜಿ ಪ್ರಧಾನಿ ಡಾ.ಮನಮೋಹನ್ ಸಿಂಗ್, ವಿಧಾನಪರಿಷತ್ ಸದಸ್ಯ ಪಟೇಲ್ ಶಿವರಾಮ್, ಪದ್ಮ ಪ್ರಶಸ್ತಿ ಪುರಸ್ಕತರಾದ ಸುಕ್ರಿ ಬೊಮ್ಮನಗೌಡ, ಖ್ಯಾತ ಸಾಹಿತಿ ನಾ ಡಿಸೋಜ , ಚಲನಚಿತ್ರ ನಟ

ಸರಿಗಮ ವಿಜಿ ಸೇರಿದಂತೆ ಸೇರಿದಂತೆ ಇತ್ತೀಚೆಗೆ ಅಗಲಿದ ಗಣ್ಯರಿಗೆ ವಿಧಾನಪರಿಷತ್‌ನಲ್ಲಿ ಭಾವಪೂರ್ಣ ಸಂತಾಪ ಸೂಚಿಸಲಾಯಿತು.

*****************

ವಿಧಾನಪರಿಷತ್ ಸದಸ್ಯ ರವಿಕುಮಾರ್ ಎನ್. ಅವರನ್ನು ಕರ್ನಾಟಕ ವಿಧಾನಪರಿಷತ್ತಿನ ವಿರೋಧ ಪಕ್ಷದ ಮುಖ್ಯ ಸಚೇತಕರನ್ನಾಗಿ ನೇಮಕ ಮಾಡಲಾಗಿದೆ ಎಂದು ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ತಿಳಿಸಿದ್ದಾರೆ. ಈ ಹಿನ್ನೆಲೆಯಲ್ಲಿ ರವಿಕುಮಾರ್ ಎನ್. ಅವರನ್ನು ಬಿಜೆಪಿ ರಾಜ್ಯಾಧ್ಯಕ್ಷ ಹಾಗೂ ಶಾಸಕ ಬಿ.ವೈ.ವಿಜಯೇಂದ್ರ ಮತ್ತು ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು ಅಭಿನಂದಿಸಿದ್ದಾರೆ.

*****************

ಬಿಬಿಎಂಪಿ ವ್ಯಾಪ್ತಿಯಲ್ಲಿ ಸಮೀಕ್ಷೆ ಮೂಲಕ ಗುರುತಿಸಿರುವ ಬೀದಿ ಬದಿ ವ್ಯಾಪಾರಿಗಳಿಗೆ ತ್ವರಿತವಾಗಿ ಗುರುತಿನ ಚೀಟಿ ವಿತರಿಸಲು ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಪಾಲಿಕೆ ವ್ಯಾಪ್ತಿಯಲ್ಲಿ ವಿವಿಧ ವಿಷಯಗಳ ಕುರಿತು ನಡೆದ ಸಭೆ ಉದ್ದೇಶಿಸಿ ಮಾತನಾಡಿದ ಅವರು, ಪಾಲಿಕೆ ವ್ಯಾಪ್ತಿಯ ಎಲ್ಲಾ ೮ ವಲಯಗಳಲ್ಲಿ ಸುಮಾರು ೨೭ ಸಾವಿರ ಬೀದಿ ಬದಿ ವ್ಯಾಪಾರಿಗಳನ್ನು ಗುರುತಿಸಲಾಗಿದ್ದು, ಎಲ್ಲರಿಗೂ ಶೀಘ್ರ ಗುರುತಿನ ಚೀಟಿ ವಿತರಣೆ ಮಾಡಲು ಸೂಚಿಸಿದ್ದಾರೆ.

ಗುರುತಿಸಿರುವಂತಹ ವ್ಯಾಪಾರ ವಲಯಗಳಲ್ಲಿ, ಬೀದಿ ಬದಿ ವ್ಯಾಪಾರಿಗಳು ವ್ಯಾಪಾರ ಮಾಡಲು ಅನುವು ಮಾಡಿಕೊಡಬೇಕೆಂದು ನಿರ್ದೇಶನ ನೀಡಿದ್ದಾರೆ.

*****************

ನೆರೆ ರಾಜ್ಯಗಳಾದ ಆಂಧ್ರ ಪ್ರದೇಶ ಹಾಗೂ ಮಹಾರಾಷ್ಟ್ರಗಳಲ್ಲಿ ಹಕ್ಕಿ ಜ್ವರ ಪ್ರಕರಣಗಳು ಕಂಡು ಬಂದಿದ್ದು. ರಾಜ್ಯದಲ್ಲಿಯೂ ಕೆಲವು ಸ್ಥಳಗಳಲ್ಲಿ ಪ್ರಕರಣಗಳು ವರದಿಯಾಗಿವೆ. ಈ ಹಿನ್ನಲೆಯಲ್ಲಿ ಸಾರ್ವಜನಿಕರು ಯಾವುದೇ ಆತಂಕಕ್ಕೆ ಒಳಗಾಗದೆ ಅಗತ್ಯ ಮುನ್ನೆಚ್ಚರಿಕೆ ವಹಿಸುವಂತೆ ಬೆಂಗಳೂರು ನಗರ ಜಿಲ್ಲಾಧಿಕಾರಿ ಜಗದೀಶ. ಜಿ ತಿಳಿಸಿದ್ದಾರೆ.

ಇಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲೆಯಲ್ಲಿ ಹಕ್ಕಿ ಜ್ವರ ಹರಡದಂತೆ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಲು ಕರೆಯಲಾಗಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸಾರ್ವಜನಿಕರು ಭಯಭೀತರಾಗದೆ ಕೋಳಿ ಮಾಂಸ ಮತ್ತು ಮೊಟ್ಟೆಗಳನ್ನು ಚೆನ್ನಾಗಿ ಬೇಯಿಸಿ ಸೇವಿಸಬೇಕು ಎಂದು ಸಲಹೆ ನೀಡಿದ್ದಾರೆ.

*****************

ಬೆಂಗಳೂರು ಪೂರ್ವ ನಿಲ್ದಾಣವನ್ನು ಇದೇ ೧೩ ರಿಂದ ಪ್ರಯಾಣಿಕರ ಸಂಚಾರಕ್ಕಾಗಿ ತಾತ್ಕಾಲಿಕವಾಗಿ ಮುಚ್ಚಲಾಗುತ್ತದೆ ಎಂದು ನೈರುತ್ಯ ರೈಲ್ವೆ ತಿಳಿಸಿದೆ.

ಪ್ರಸ್ತುತ ಅಪ್ ಮತ್ತು ಡೌನ್ ಲೈನ್ ಪ್ಲಾಟ್‌ಫಾರ್ಮ್‌ಗಳನ್ನು ತೆಗೆದುಹಾಕಿ ಮೂರನೇ ಮತ್ತು ನಾಲ್ಕನೇ ಮಾರ್ಗಗಳಿಗೆ ಹೊಸ ಹಳಿಗಳನ್ನು ಹಾಕಲು ಈ ಕ್ರಮ ಕೈಗೊಳ್ಳಲಾಗಿದೆ. ಈ ಕಾಮಗಾರಿಗಳಿಂದಾಗಿ, ಇದೇ ತಿಂಗಳ ೧೩ ರಿಂದ ಮುಂದಿನ ಸೂಚನೆಯವರೆಗೆ ಒಟ್ಟು ೪೧ ರೈಲುಗಳ ನಿಲುಗಡೆಗಳನ್ನು ಬೆಂಗಳೂರು ಪೂರ್ವ ನಿಲ್ದಾಣದಲ್ಲಿ ತಾತ್ಕಾಲಿಕವಾಗಿ ರದ್ದುಗೊಳಿಸಲಾಗುತ್ತದೆ ಎಂದು ಸ್ಪಷ್ಟಪಡಿಸಿದೆ.

*****************

ಸೌರಶಕ್ತಿ ಬಳಕೆಯಲ್ಲಿ ನೈರುತ್ಯ ರೈಲ್ವೆ ವಲಯ ಸ್ವಾವಲಂಬಿಯಾಗುವತ್ತ ಹೆಜ್ಜೆ ಇಟ್ಟಿದೆ. ನವೀಕರಿಸಬಹುದಾದ ಇಂಧನದ ಬಳಕೆಯಲ್ಲಿ ಮಹತ್ವದ ಪ್ರಗತಿ ಸಾಗಿಸುತ್ತಿದ್ದು, ೨೦೩೦ ರೊಳಗೆ ನಿವ್ವಳ ಶೂನ್ಯ ಇಂಗಾಲ ಹೊರಸೂಸುವ ಗುರಿಯನ್ನು ಹೊಂದಿದೆ. ೨೦೨೪-೨೫ರ ಹಣಕಾಸು ವರ್ಷದಲ್ಲಿ, ನೈಋತ್ಯ ರೈಲ್ವೆಯು ೧ ನಿಲ್ದಾಣ ಮತ್ತು ೯ ಸೇವಾ ಕಟ್ಟಡಗಳಲ್ಲಿ ಸೋಲಾರ್ ಅಳವಡಿಕೆಯಿಂದ ತನ್ನ ಸೌರ ಸಾಮರ್ಥ್ಯ ಹೆಚ್ಚಿಸಿದೆ.

ಸೋಲಾರ್ ಅಳವಡಿಕೆಯಿಂದ ಸುಮಾರು ೫೭ ಲಕ್ಷ ಯೂನಿಟ್ ವಿದ್ಯುತ್ ಉತ್ಪಾದನೆಗೆ ಸಹಕಾರಿಯಾಗಿದ್ದು, ಅಂದಾಜು ೨.೮೧ ಕೋಟಿ ಉಳಿತಾಯ ಮಾಡಿಕೊಂಡಿದೆ ಎಂದು ನೈರುತ್ಯ ರೈಲ್ವೆ ಮುಖ್ಯ ಸಾರ್ವಜನಿಕ ಸಂಪರ್ಕ ಅಧಿಕಾರಿ ಡಾ. ಮಂಜುನಾಥ ಕನಮಡಿ ತಿಳಿಸಿದ್ದಾರೆ.

*****************

ಚಿತ್ರದುರ್ಗದ ನಾಯಕನಹಟ್ಟಿ ಗುರು ತಿಪ್ಪೇರುದ್ರಸ್ವಾಮಿ ಜಾತ್ರೆಗೆ ರಾಜ್ಯದ ವಿವಿಧೆಡೆಗಳಿಂದ ೩ ರಿಂದ ೪ ಲಕ್ಷಕ್ಕೂ ಹೆಚ್ಚು ಭಕ್ತರು ಆಗಮಿಸುವ ನಿರೀಕ್ಷೆ ಇದೆ. ಈ ಹಿನ್ನೆಲೆಯಲ್ಲಿ ಸಮರ್ಪಕವಾಗಿ ಶುದ್ಧ ಕುಡಿಯುವ ನೀರು ಪೂರೈಕೆ ಹಾಗೂ ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ನಾಯಕನಹಟ್ಟಿ ಪಟ್ಟಣದಲ್ಲಿ ಅಗತ್ಯ ಇರುವ ಕಡೆ ಶಾಶ್ವತವಾಗಿ ಸಿ.ಸಿ.ಕ್ಯಾಮೆರಾ ಅಳವಡಿಸುವಂತೆ ಜಿಲ್ಲಾಧಿಕಾರಿ ನಿರ್ದೇಶನ ನೀಡಿದ್ದಾರೆ.

ಇದೇ ಮಾರ್ಚ್ ೦೯ ರಿಂದ ೨೪ ರವರೆಗೆ ಜಾತ್ರೆ ನಡೆಯಲಿದ್ದು, ಮಾರ್ಚ್ ೧೭ರಂದು ದೊಡ್ಡ ರಥೋತ್ಸವ ನಡೆಯಲಿದೆ.

********ಮುಕ್ತಾಯ********